(ರೂ.ಕೋಟಿಗಳಲ್ಲಿ)

ವರ್ಷ	ನಿಗದಿಪಡಿಸಿದ ಅನುದಾನ	ಬಿಡುಗಡೆಯಾದ ಅನುದಾನ	ಖರ್ಚಾದ ಅನುದಾನ	ನಿಗದಿಪಡಿಸಿದ ಮೊತ್ತದಲ್ಲಿ ಉಳಿಕೆಯಾದ ಅನುದಾನ
2006–07	482.16	475.15	475.15	7.01
2007–08	1160.87	796.05	796.05	364.82
2008–09	1263.89	988.76	988.76	275.13
2009–10 * (ಫೆಬ್ರವರಿ 2010ರ ಅಂತ್ಯಕ್ಕೆ)	1144.05	695.08	695.08	448.97

ಅಭಿವೃದ್ಧಿ ಇಲಾಖೆಗಳು ಪ್ರತಿ ವರ್ಷ ಬಿಡುಗಡೆಯಾದ ಅನುದಾನವನ್ನು ಖರ್ಚು ಮಾಡಲಾಗಿರುತ್ತದೆ.

ಸಣ್ಣ ಹಿಡುವಳಿದಾರರಿಗೆ ಗಂಗಾ ಕಲ್ಯಾಣ ಯೋಜನೆಯಲ್ಲಿ ಸೌಲಭ್ಯಗಳನ್ನು ನೀಡುವುದು

891 (601) ಶ್ರೀ ಲಾಲಾಜಿ ಆರ್.ಮೆಂಡನ್ (ಕಾಪು) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ಜಿಲ್ಲೆಯಲ್ಲಿ ಸಣ್ಣ ಹಿಡುವಳಿದಾರರು ಇರುವುದರಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ 20 ಗುಂಟೆ ಜಮೀನು ಇರುವ ಫಲಾನುಭವಿಗಳು ಈ ಸೌಲಭ್ಯವನ್ನು ಪಡೆಯಲು ಸಾಧ್ಯವೇ;

ಆ) ಸರ್ಕಾರ ಈ ಬಗ್ಗೆ ಯಾವ ಕ್ರಮ ತೆಗೆದುಕೊಳ್ಳುವುದು;

ಇ) ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯಲ್ಲಿ ಒಟ್ಟು ಎಷ್ಟು ಫಲಾನುಭವಿಗಳಿಗೆ ಈ ಯೋಜನೆಯಡಿಯಲ್ಲಿ ಒದಗಿಸಲಾಗಿದೆ; ಇದರ ಒಟ್ಟು ಹಣ ಎಷ್ಟು?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು) :

ಅ) ನಿಯಮಾವಳಿಗಳಂತೆ ಕನಿಷ್ಟ 2 ಎಕರೆ ಜಮೀನು ಹೊಂದಿರುವ ಸಣ್ಣ ಹಿಡುವಳಿದಾರರಿಗೆ ಸೌಲಭ್ಯವನ್ನು ಕಲ್ಪಿಸುತ್ತಿದ್ದು, 20 ಗುಂಟೆ ಜಮೀನು ಇರುವ ಸಣ್ಣ ಹಿಡುವಳಿದಾರರು ಸೌಲಭ್ಯ ಪಡೆಯಲು ಅರ್ಹರಾಗಿರುವುದಿಲ್ಲ.

ಆ) ಯೋಜನೆಯ ನಿಬಂಧನೆಗಳಡಿ 20 ಗುಂಟೆ ಜಮೀನು ಇರುವ ಫಲಾಪೇಕ್ಷಿಗಳಿಗೆ ವೈಯಕ್ತಿಕ ನೀರಾವರಿ ಕೊಳವೆಬಾವಿ ಸೌಲಭ್ಯ ಕಲ್ಪಿಸಲು ಅವಕಾಶವಿರುವುದಿಲ್ಲ. ಆದರೆ 8 ರಿಂದ 15 ಎಕರೆ ಜಮೀನು ಒಂದೇ ಕಡೆ ಇದ್ದು 3 ಕ್ಕಿಂತ ಹೆಚ್ಚು ಫಲಾಪೇಕ್ಷಿಗಳಿಗೆ ಒದಗಿಸುವ ಸಾಮೂಹಿಕ ನೀರಾವರಿ ಘಟಕಗಳಲ್ಲಿ 20 ಗುಂಟೆ ಜಮೀನು ಹೊಂದಿರುವ ಅತೀ ಸಣ್ಣ ರೈತರೂ ಸಹ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

ಇ) ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಒಟ್ಟು 111353 ಫಲಾನುಭವಿಗಳಿಗೆ ಸೌಲಭ್ಯವನ್ನು ಒದಗಿಸಲಾಗಿದ್ದು, ಒಟ್ಟು ರೂ.76950.20 ಗಳನ್ನು ಖರ್ಚಾಗಿರುತ್ತದೆ.

2009 ನೇ ಸಾಲಿನಲ್ಲಿ ಇಲ್ಲಿಯವರೆಗೆ ಎಷ್ಟು ಬಸ್ಸುಗಳನ್ನು ಖರೀದಿಸಲಾಗಿದೆ

892 (1148) ಶ್ರೀ ಮಹದೇವ ಪ್ರಸಾದ್ (ಗುಂಡ್ಲುಪೇಟೆ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು 2009 ನೇ ಸಾಲಿನಲ್ಲಿ ಇಲ್ಲಿಯವರೆಗೆ ಎಷ್ಟು ಬಸ್ಸುಗಳನ್ನು ಖರೀದಿಸಲಾಗಿದೆ;

ಆ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು 209 ನೇ ಸಾಲಿನಲ್ಲಿ ಇಲಾಖೆಯ ವತಿಯಿಂದ ಮೂಲಭೂತ ಸೌಲಭ್ಯ ಅಭಿವೃದ್ಧಿಗಾಗಿ ಎಷ್ಟು ಅನುದಾನ ಒದಗಿಸಲಾಗಿದೆ ಹಾಗೂ ಎಷ್ಟು ಹಣವನ್ನು ಇಲ್ಲಿಯವರೆಗೆ ಬಿಡುಗಡೆ ಮಾಡಲಾಗಿದೆ. ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ;

ಇ) ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ ಎಷ್ಟು ಅನುದಾನ ಒದಗಿಸಲಾಗಿದೆ ಇಲ್ಲಿಯವರೆಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ?

ಶ್ರೀ ಆರ್.ಅಶೋಕ (ಸಾರಿಗೆ ಸಚಿವರು) :

ಅ) ಏಪ್ರಿಲ್ 2009 ರಿಂದ ಫೆಬ್ರವರಿ–2010ರ ಅಂತ್ಯದವರೆಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಒಟ್ಟು 685 ಹೊಸ ವಾಹನಗಳನ್ನು ಖರೀದಿಸಿರುತ್ತದೆ. ವಿವರ ಈ ಕೆಳಕಂಡಂತಿದೆ.